C.R.P.67

Form No.4
(Criminal)
Deposition
Sheets
(R.P.No.57)

**5ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ**

**ನ್ಯಾಯಾಲಯ, ಮಂಡ್ಯ**

# ಸ್ಪೆಷಲ್ ಕೇಸ್ ನಂಬರ್‌ಃ 95/2021

**ಚಾ.ಸಾ.–06 ಪ್ರಾ.ಸಾ.–03**

| | |
|---|---|
| **ಸಾಕ್ಷಿದಾರರ ಹೆಸರು** | **ಸ್ವಾಮಿಗೌಡ** |
| **ತಂದೆಯ ಹೆಸರು** | **ಕರೀಗೌಡ** |
| **ವಯಸ್ಸು** | **61 ವರ್ಷಗಳು** |
| **ಉದ್ಯೋಗ** | **ವ್ಯವಸಾಯ** |
| **ವಾಸ** | **ಆದನೂರು ಗ್ರಾಮ, ಕೆ.ಆರ್.ಪೇಟೆ ತಾಲ್ಲೂಕು** |

**ದಿನಾಂಕಃ 11.03.2026 ರಂದು ಪ್ರಮಾಣವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದ**

1) ನನಗೆ ಈಗ ತೋರಿಸಿದ ಮಹಜರ್ ನಲ್ಲಿ ಇರುವ ಸಹಿ ನನ್ನದು. ಮಹಜರನ್ನು ಈಗಾಗಲೇ ನಿಪಿ–2 ಎಂದು ಗುರುತಿಸಲಾಗಿದೆ, ಅದರಲ್ಲಿ ಸಾಕ್ಷಿಯು ಗುರುತಿಸಿರುವ ಅವರ ಸಹಿಯನ್ನು **ನಿಪಿ–2(ಬಿ)** ಎಂದು ಗುರುತಿಸಲಾಗಿದೆ. ನನಗೆ ಈಗ ತೋರಿಸಿದ ನಿಪಿ–3 ಫೋಟೋವಿನಲ್ಲಿ ನಾನು ಕಂಡುಬರುತ್ತೇನೆ. ಸದರಿ ಸಹಿಯನ್ನು ನಾನು ಆದನೂರು ಸರ್ಕಲ್ ಬಳಿ ಇರುವ ನನ್ನ ಅಂಗಡಿಯ ಬಳಿ ಮಾಡಿರುತ್ತೇನೆ. ಸದರಿ ಸ್ಥಳದಲಿ ಗಲಾಟೆಯಾಗಿದ್ದು ಆ ಸಂಬಂದ ಮಹಜರ್ ತಯಾರಿಸಲು ಬಂದಿರುತ್ತೇವೆ ಎಂದು ಪೋಲೀಸರು ಹೇಳಿದರು. ಮಹಜರ್ ಸಮಯದಲ್ಲಿ ಸುರೇಶ, ಚಾಸಾ- 1 ಧನಂಜಯ ರವರು ಇದ್ದರು. ಪೋಲೀಸರು ಅಲ್ಲಿ ಏನು ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೋಲೀಸರಿಗೆ ಸ್ಥಳವನ್ನು ಯಾರು ತೋರಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೋಲೀಸರು ಸ್ಥಳದಿಂದ ಯಾವುದಾದರೂ ವಸ್ತುವನ್ನು ವಶಪಡಿಸಿಕೊಂಡಿರುವ ಬಗ್ಗೆ ನನಗೆ ಗೊತ್ತಿಲ್ಲ. ಈ ದಿನ ನ್ಯಾಯಾಲಯದ ಮುಂದಿರುವ

ಎಂಒ–1 ರಿಂದ 3 ವಸ್ತುಗಳನ್ನು ಈ ಹಿಂದೆ ನಾನು ನೋಡಿರುವುದಿಲ್ಲ. ಅವುಗಳನ್ನು ಪೋಲೀಸರಿಗೆ ಯಾರು ನೀಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸದರಿ ವಸ್ತುಗಳಿಗೂ ಈ ಪ್ರಕರಣಕ್ಕೂ ಯಾವುದಾದರೂ ಸಂಬಂದ ಇರುವ ಬಗ್ಗೆ ನನಗೆ ಗೊತ್ತಿಲ್ಲ. ನಿಪಿ–2 ಮಹಜರಿನಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಚಾಸಾ- 3 ರವರು ನಿಪಿ–4 ರಂತೆ ನನ್ನ ಮುಂದೆ ಹೇಳಿಕೆಯನ್ನು ನೀಡಿರುತ್ತಾರೆ. ಮಹಜರನ್ನು ಸುಮಾರು 5 ವರ್ಷಗಳ ಹಿಂದೆ ಮಾಡಿರುತ್ತಾರೆ, ದಿನಾಂಕ ನೆನಪಿಲ್ಲ.

**(ಈ ಹಂತದಲ್ಲಿ ಮಾನ್ಯ ಸರಕಾರಿ ಅಭಿಯೋಜಕರು ಸಾಕ್ಷಿಯನ್ನು ಭಾಗಷಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲು ಮಾಡಲು ಅನುಮತಿ ಕೋರಿದ ಮೇರೆಗೆ ಪರಿಶೀಲಿಸಿ ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 157ರ ಪ್ರಕಾರ ಅನುಮತಿ ಕೊಡಲಾಯಿತು.)**

**<u>ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರವರಿಂದ:</u>**

2) ದಿಃ25.02.2021 ರಂದು ಪೋಲೀಸರು ಸದರಿ ಮಹಜರನ್ನು ತಯಾರಿಸಿರುತ್ತಾರೆ ಎಂದರೆ ಸರಿ. ಚಾಸಾ– 1 ಮತ್ತು ಆರೋಪಿತರ ಮದ್ಯೆ ಜಾತಿ ನಿಂದನ ಮತ್ತು ಹಲ್ಲ ಪ್ರಕರಣಕ್ಕೆ ಸಂಬಂದಪಟ್ಟಂತೆ ಮಹಜರಿಗೆ ಪಂಚರಾಗಿ ಸಹಕರಿಸಬೇಕಂದು ಕೋರಿದ ಮೇರೆಗೆ ನಾನು ಸ್ಥಳದಲ್ಲಿ ಹಾಜರಿದ್ದೆ ಎಂದರೆ ಸರಿಯಲ್ಲ. ಆ ಸಮಯ ಚಾಸಾ- 1 ರವರು ಘಟನಾ ಸ್ಥಳವನ್ನು ತೋರಿಸಿಕೊಟ್ಟಂತೆ ನನ್ನ ಮತ್ತು ಚಾಸಾ–7 ರವರ ಸಮಕ್ಷಮ ಬೆಳಿಗ್ಗೆ 11–00 ರಿಂದ 12–00ರವರಗೆ ನಿಪಿ–2 ರಂತೆ ಮಹಜರನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯ ನಿಪಿ–3 ರಂತೆ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಮಹಜರ್ ಸಮಯ ಚಾಸಾ- 1 ರವರು ಘಟನೆ ಸಮಯ ಅವರು ಧರಿಸಿದ್ದ ಬಟ್ಟೆಗಳನ್ನು ಮತ್ತು ಆರೋಪಿತರು ಕೃತ್ಯಕ್ಕೆ ಬಳಸಿದ್ದ ಕಲ್ಲನ್ನು ತನಿಖಾಧಿಕಾರಿಗಳ ಮುಂದೆ ಹಾಜರುಪಡಿಸಿದ್ದನ್ನು ಅವರು ಮಹಜರ್ ಮೂಲಕ ಅವುಗಳನ್ನು ಸೀಲ್ ಮಾಡಿ ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರವನ್ನು ತಿಳಿದು ಪೊಲೀಸರು ಬರೆದಿದ್ದನ್ನು ಓದಿ ನೋಡಿ ಸ್ಥಳದಲ್ಲಿ ಸಹಿ ಹಾಕಿರುತ್ತೇನೆ ಎಂದರೆ ಸರಿಯಲ್ಲ. ಆ ದಿನ ಎಂಒ–1 ರಿಂದ 3 ವಸ್ತುಗಳನ್ನು ನಾನು ಗುರುತಿಸಿದ್ದರೂ ಸಹಾ ನಾನು ಮತ್ತು ಆರೋಪಿತರು ಒಂದೆ ಜಾತಿಯವರಾದ ಕಾರಣ

ಹಾಗೂ ನಾವು ಊರಿನಲ್ಲಿ ಅನ್ಯೋನ್ಯವಾಗಿರುವ ಕಾರಣ ಅವರಿಗೆ ಅನುಕೂಲವಾಗುವಂತೆ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿತರ ಪರ ಶ್ರೀ ಎನ್.ಎಂ ವಕೀಲರಿಂದಃ**

3) ನಿಪಿ–3 ಫೋಟೋವನ್ನು ಯಾರು ಯಾವ ಉದ್ದೇಶಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಚಾಸಾ- 1 ಸಹಾ ನನ್ನ ಸ್ನೇಹಿತ ಎಂದರೆ ಸರಿ.

**ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ** ಇಲ್ಲ ಎಂದು ನುಡಿಯುತ್ತಾರೆ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿದೆ

**(ಮಂಜುಳಾ ಇಟ್ಟಿ)**

5ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ

ನ್ಯಾಯಾಲಯ, ಮಂಡ್ಯ